# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 22 |
| ಸದಸ್ಯರ ಹೆಸರು | ಶ್ರೀ ಕೆ.ಟಿ.ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | 07-12-2020 |
| ಉತ್ತರಿಸಬೇಕಾದ ಸಚಿವರು | ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು |

| ಪ್ರಶ್ನೆ | ಉತ್ತರ |
|---|---|
| **ಅ)** 1995ರ ನಂತರ ಪ್ರಾರಂಭವಾದ ಶಾಲಾ-ಕಾಲೇಜುಗಳನ್ನು ವೇತನಾನುದಾನಕ್ಕೆ ಒಳಪಡಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೆ; | ಆರ್ಥಿಕ ಇಲಾಖೆಯ ಪತ್ರ ಸಂಖ್ಯೆ : ಅಇ 157 ವೆಚ್ಚ-8/2020, ದಿನಾಂಕ :10.06.2020ರಂತೆ ತಾತ್ಕಾಲಿಕವಾಗಿ ವೇತನಾನುದಾನಕ್ಕೆ ಒಳಪಡಿಸುವ ಪ್ರಕ್ರಿಯೆಯನ್ನು ತಡೆಹಿಡಿಯಲಾಗಿದೆ. |
| **ಆ)** ಈ ಶಾಲಾ ಕಾಲೇಜಿಗಳಲ್ಲಿ ಕಳೆದ 25 ವರ್ಷಗಳಿಂದ ಸಿಬ್ಬಂದಿಗಳು ಕಡಿಮೆ ವೇತನಕ್ಕೆ ಕಾರ್ಯನಿರ್ವಹಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಖಾಸಗಿ ಅನುದಾನರಹಿತ ಶಾಲಾ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಶಿಕ್ಷಕರು/ಉಪನ್ಯಾಸಕರುಗಳಿಗೆ ಆ ಹುದ್ದೆಯ ಕನಿಷ್ಠ ವೇತನವನ್ನು ಪಾವತಿ ಮಾಡುವಂತೆ ಕರ್ನಾಟಕ ಶಿಕ್ಷಣ ಕಾಯ್ದೆ 1983 ಸೆಕ್ಷನ್ 89ರಡಿ 1999ರಲ್ಲಿ ನಿಯಮಗಳನ್ನು ರೂಪಿಸಲಾಗಿದ್ದು, ಅದರಂತೆ, ರಾಜ್ಯದಲ್ಲಿನ ಎಲ್ಲಾ ಖಾಸಗಿ ಅನುದಾನ ರಹಿತ ಶಾಲಾ ಕಾಲೇಜುಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಶಿಕ್ಷಕರಿಗೆ ಕನಿಷ್ಠ ವೇತನವನ್ನು ನೀಡಬೇಕಾಗಿರುತ್ತದೆ. |
| **ಇ)** ಬಂದಿದ್ದಲ್ಲಿ, ಇವರಿಗೆ ನ್ಯಾಯ ದೊರಕಿಸುವ ನಿಟ್ಟಿನಲ್ಲಿ 1995ರ ನಂತರ ಶಾಲಾ-ಕಾಲೇಜುಗಳನ್ನು ವೇತನಾನುದಾನಕ್ಕೆ ಒಳಪಡಿಸಲು ಸರ್ಕಾರ ಕೈಗೊಂಡ ಕ್ರಮಗಳೇನು; ವೇತನಾನುದಾನಕ್ಕೆ ಒಳಪಡಿಸಲಾಗುವುದು ಯಾವಾಗ? (ಮಾಹಿತಿ ಒದಗಿಸುವುದು) | ದಿನಾಂಕ :14.01.2020ರಂದು ವಿವಿಧ ಕನ್ನಡ ಮಾಧ್ಯಮ ಶಾಲಾ ವ್ಯವಸ್ಥಾಪಕ ಮಂಡಳಿಗಳ ಪ್ರತಿನಿಧಿಗಳ ಜೊತೆ ನಡೆದ ಸಭೆಯಲ್ಲಿ 1995ರ ನಂತರದಲ್ಲಿ ಪ್ರಾರಂಭವಾದ ಖಾಸಗಿ ಅನುದಾನ ರಹಿತ ಕನ್ನಡ ಮಾಧ್ಯಮ ಶಾಲಾ ಕಾಲೇಜುಗಳಿಗೆ ಸಹಾಯಾನುದಾನಕ್ಕೆ ಒಳಪಡಿಸುವ ಕುರಿತಂತೆ ಚರ್ಚಿಸಲಾಗಿದೆ. 1995 ರಿಂದ 2018ರವರೆಗೆ ಸಂಬಂಧಿಸಿದಂತೆ ಪ್ರತಿ 5 ವರ್ಷದ ಬ್ಲಾಕ್ ಅವಧಿಗೆ ಒಟ್ಟು ಕನ್ನಡ ಮಾಧ್ಯಮ ಶಾಲಾ ಕಾಲೇಜುಗಳ ಸಂಖ್ಯೆಯನ್ನು ಅವುಗಳ ಹೆಸರಿನೊಂದಿಗೆ ಮತ್ತು ಒಟ್ಟು ಶಿಕ್ಷಕರುಗಳ ಸಂಖ್ಯೆಯನ್ನು ಹಾಗೂ ಅಂದಾಜು ವೆಚ್ಚದ ಮಾಹಿತಿಯನ್ನು ನೀಡಿದ್ದಲ್ಲಿ ಈ ಬೇಡಿಕೆಯ ಕುರಿತಂತೆ |

| | |
|---|---|
| | ನಿರ್ಣಯಿಸಲು ಸಾಧ್ಯವಾಗುತ್ತದೆ ಎಂದು ಮನಗಂಡು, ಪ್ರತಿ 5 ವರ್ಷಕ್ಕೆ ಸೀಮಿತಗೊಳಿಸಿ ಮಾಹಿತಿಯನ್ನು ಕ್ರೋಢೀಕರಿಸಲು ನಿರ್ಧರಿಸಿದ್ದು, ಅದರಂತೆ ಕ್ರೋಢೀಕೃತ ಮಾಹಿತಿಯನ್ನು ಪಡೆಯಲು ಕ್ರಮಕೈಗೊಳ್ಳಲಾಗಿದೆ. |

ಇಡಿ 154 ಪಿಎಂಸಿ 2020

[ ಎಸ್.ಸುರೇಶ್ ಕುಮಾರ್]
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ
ಸಕಾಲ ಸಚಿವರು.